Akashvani : Bangalore
National Bulletin In Kannada
16.10.2024 / 7.35 am
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

<><*<><>*><>

ಮುಖ್ಯಾಂಶಗಳು

೧. ರಾಷ್ಟ್ರಪತಿ ದ್ರೌಪದಿ ಮುರ್ಮು ಇಂದು ಮಾರಿಟಾನಿಯಾಗೆ ಭೇಟಿ; ದ್ವಿಪಕ್ಷೀಯ ಮಾತುಕತೆ

೨. ಇಸ್ಲಾಮ್‌ಬಾದ್‌ನಲ್ಲಿಂದು ನಡೆಯಲಿರುವ ಶಾಂಘೈ ಸಹಕಾರ ಸಂಸ್ಥೆಯ ಸಭೆಯಲ್ಲಿ ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಭಾಗಿ

೩. ಜಮ್ಮು ಮತ್ತು ಕಾಶ್ಮೀರದ ಕೇಂದ್ರಾಡಳಿತ ಪ್ರದೇಶದ ಮುಖ್ಯಮಂತ್ರಿಯಾಗಿ ನ್ಯಾಷನಲ್ ಕಾನ್ಫರೆನ್ಸ್ ನಾಯಕ ಒಮರ್ ಅಬ್ದುಲ್ಲಾ ಇಂದು ಪ್ರಮಾಣ ವಚನ ಸ್ವೀಕಾರ

೪. ಬಂಗಾಳಕೊಲ್ಲಿಯಲ್ಲಿ ವಾಯುಭಾರ ಕುಸಿತ; ಕರ್ನಾಟಕದ ಹಲವು ಜಿಲ್ಲೆಗಳಲ್ಲಿ ಮಳೆ ಮುಂದುವರಿಕೆ

೫. ಟೆಸ್ಟ್ ಕ್ರಿಕೆಟ್; ಬೆಂಗಳೂರಿನಲ್ಲಿಂದು ಭಾರತ-ನ್ಯೂಜಿಲೆಂಡ್ ನಡುವಿನ ಮೊದಲ ಪಂದ್ಯ; ಮಳೆ ಅಡ್ಡಿ ಸಾಧ್ಯತೆ

<><*<><>*><>

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ತಮ್ಮ ಮೂರು ದಿನಗಳ ಅಲ್ಜೀರಿಯಾ ಪ್ರವಾಸವನ್ನು ಮುಗಿಸಿದ ನಂತರ ತಮ್ಮ ಭೇಟಿಯ ಎರಡನೇ ಚರಣದಲ್ಲಿ ಇಂದು ಮಾರಿಟಾನಿಯಾಗೆ ತೆರಳಲಿದ್ದಾರೆ. ಮುರ್ಮು ಅವರು ಅಲ್ಜೀರಿಯಾದ ನಾಯಕತ್ವ ಮತ್ತು ನಿಯೋಗಗಳೊಂದಿಗೆ ವಿವಿಧ ದ್ವಿಪಕ್ಷೀಯ ಸಭೆಗಳನ್ನು ನಡೆಸಿದ್ದು, ಭಾರತ-ಅಲ್ಜೀರಿಯಾ ಸಂಬಂಧಕ್ಕೆ ಪ್ರಮುಖ ಉತ್ತೇಜನವನ್ನು ನೀಡಿದ್ದಾರೆ. ರಾಷ್ಟ್ರಪತಿ ಅವರು ಮೌರಿಟಾನಿಯಾಗೆ ಒಂದು ದಿನದ ಭೇಟಿಯಲ್ಲಿ ಹಲವು ಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದಾರೆ. ಅವರು ತಮ್ಮ ಸಹವರ್ತಿ ಮೊಹಮ್ಮದ್ ಔಲ್ಡ್ ಗಜೌನಿ ಮತ್ತು ಇತರ ನಾಯಕರೊಂದಿಗೆ ದ್ವಿಪಕ್ಷೀಯ ಸಭೆಗಳನ್ನು ನಡೆಸಲಿದ್ದಾರೆ. ಅಲ್ಲದೆ, ಮುರ್ಮು ಅವರು ಮಾರಿಟಾನಿಯಾದಲ್ಲಿರುವ ಅನಿವಾಸಿ ಭಾರತೀಯರೊಂದಿಗೆ ಸಂವಾದ ನಡೆಸಲಿದ್ದಾರೆ.

ರಾಷ್ಟ್ರಪತಿಗಳ ಅಲ್ಜೀರಿಯಾ ಭೇಟಿ ಐತಿಹಾಸಿಕ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯ ಹೇಳಿದೆ. ಮಾಧ್ಯಮಗಳನ್ನು ಉದ್ದೇಶಿಸಿ ಮಾತನಾಡಿದ ವಿದೇಶಾಂ ಗ ಸಚಿವಾಲಯದ ಕಾರ್ಯದರ್ಶಿ ಅರುಣ್ ಕುಮಾರ್ ಚಟರ್ಜಿ, ಈ ಭೇಟಿಯು ಉಭಯ ದೇಶಗಳ ನಡುವಿನ ರಾಜಕೀಯ, ಆರ್ಥಿಕ ಮತ್ತು ಸಾಂಸ್ಕೃತಿಕ ಸಂಬಂಧಗಳಿಗೆ ಉತ್ತೇಜನವನ್ನು ನೀಡುತ್ತದೆ. ಬ್ರಿಕ್ಸ್‌ನಲ್ಲಿ ಅಲ್ಜೀರಿಯಾದ ಸದಸ್ಯತ್ವದ ವಿಷಯವನ್ನು ಶೃಂಗಸಭೆಯಲ್ಲಿ ಮಂಡಿಸಿದಾಗ ಭಾರತವು ಬೆಂಬಲಿಸುತ್ತದೆ ಎಂದು ಹೇಳಿದರು.

<><*<><>*><>

ಪಾಕಿಸ್ತಾನದ ಇಸ್ಲಾಮಾಬಾದ್ ನಲ್ಲಿ ಇಂದು ನಡೆಯಲಿರುವ ಶಾಂಘೈ ಸಹಕಾರ ಸಂಸ್ಥೆಯ ಸರ್ಕಾರಗಳ ಮುಖ್ಯಸ್ಥರ ಸಭೆಯಲ್ಲಿ ವಿದೇಶಾಂಗ ಸಚಿವ ಡಾ.ಎಸ್. ಜೈಶಂಕರ್ ಭಾಗವಹಿಸಲಿದ್ದಾರೆ. ಅವರು ಎರಡು ದಿನಗಳ ಭೇಟಿಗಾಗಿ ಕಳೆದ ರಾತ್ರಿ ನೆರೆ ರಾಷ್ಟ್ರದ ರಾಜಧಾನಿ ತಲುಪಿದ್ದಾರೆ. ಎಸ್ ಸಿಒ ಸಭೆ ಪಾಕಿಸ್ತಾನದ ಅಧ್ಯಕ್ಷತೆಯಲ್ಲಿ ನಡೆಯುತ್ತಿದ್ದು, ಅದರಲ್ಲಿ ಜೈಶಂಕರ್ ಭಾರತವನ್ನು ಪ್ರತಿನಿಧಿಸಲಿದ್ದಾರೆ. ಎಸ್‌ಸಿಒ ಸಂಸ್ಥೆಯಲ್ಲಿ ಭಾರತ ಅತ್ಯಂತ ಸಕ್ರೀಯ ರಾಷ್ಟ್ರವಾಗಿದ್ದು, ಸಂಸ್ಥೆಯೊಳಗಿನ ಹಲವು ಉಪಕ್ರಮ ಹಾಗೂ ಕಾರ್ಯತಂತ್ರಗಳಲ್ಲಿ ಭಾಗವಹಿಸುತ್ತಿದೆ. ವ್ಯಾಪಾರ ಮತ್ತು ಆರ್ಥಿಕ ಅಭಿವೃದ್ಧಿ ಕಾರ್ಯಸೂಚಿಯೊಂದಿಗೆ ಎಸ್‌ಸಿಒದ ವಾರ್ಷಿಕ ಸಭೆಗಳು ನಡೆಯುತ್ತವೆ. ೯ ವರ್ಷಗಳ ಬಳಿಕ ಇದೇ ಮೊದಲ ಬಾರಿಗೆ ಭಾರತದ ವಿದೇಶಾಂಗ ಸಚಿವರು ಪಾಕಿಸ್ತಾನಕ್ಕೆ ಭೇಟಿ ನೀಡಿದ್ದು, ಅವರು ಹಲವು ದ್ವಿಪಕ್ಷೀಯ ಮಾತುಕತೆಗಳನ್ನು ನಡೆಸುವ ಸಾಧ್ಯತೆ ಇದೆ ಎಂದು ಹೇಳಲಾಗಿದೆ.

<><*<><>*><>

ಕೇಂದ್ರ ಹಣಕಾಸು ಮತ್ತು ಕಾರ್ಪೊರೇಟ್ ವ್ಯವಹಾರಗಳ ಸಚಿವೆ ನಿರ್ಮಲಾ ಸೀತಾರಾಮನ್ ಇಂದಿನಿಂದ ಮೆಕ್ಸಿಕೋ ಮತ್ತು ಅಮೆರಿಕಾಕ್ಕೆ ಭೇಟಿ ನೀಡಲಿದ್ದಾರೆ. ಮೊದಲ ಹಂತದಲ್ಲಿ ಇಂದಿನಿಂದ ೧೦ ರವರೆಗೆ ಮೆಕ್ಸಿಕೋಗೆ ಭೇಟಿ ನೀಡುವ ಸೀತಾರಾಮನ್ ಅವರು ಗ್ವಾಡಲಜಾರಾದಲ್ಲಿರುವ ಪ್ರಮುಖ ಭಾರತೀಯ ಮಾಹಿತಿ ತಂತ್ರಜ್ಞಾನ ದಿಗ್ಗಜರು ಸೇರಿದಂತೆ ಜಾಗತಿಕ ತಂತ್ರಜ್ಞಾನದ ನಾಯಕರನ್ನು ಒಟ್ಟುಗೂಡಿಸುವ ತಂತ್ರಜ್ಞಾನ ನಾಯಕರ ದುಂಡು ಮೇಜಿನ ಸಭೆಯ ಅಧ್ಯಕ್ಷತೆ ವಹಿಸಲಿದ್ದಾರೆ. ಸೀತಾರಾಮನ್ ಮೆಕ್ಸಿಕೋದ ಹಣಕಾಸು ಸಚಿವ ರೋಜೆಲಿಯೊ ರಾಮಿರೆಜ್ ಡೆ ಲಾ ಒ ಅವರೊಂದಿಗೆ ದ್ವಿಪಕ್ಷೀಯ ಸಭೆಯನ್ನು ನಡೆಸಲಿದ್ದಾರೆ.

ಅಲ್ಲದೆ, ಅವರು ಸಂಸದೀಯ ಸಹಕಾರವನ್ನು ಬಲಪಡಿಸಲು ಮತ್ತು ಆರ್ಥಿಕ ಅಭಿವೃದ್ಧಿಯನ್ನು ಉತ್ತೇಜಿಸಲು ಮೆಕ್ಸಿಕನ್ ಸಂಸತ್ತಿನ ಹಲವಾರು ಸದಸ್ಯರೊಂದಿಗೆ ಚರ್ಚೆಗಳನ್ನು ನಡೆಸುವರು. ಮೆಕ್ಸಿಕೋ ನಗರದಲ್ಲಿ ಸೀತಾರಾಮನ್ ಅವರು ಭಾರತ-ಮೆಕ್ಸಿಕೋ ವ್ಯಾಪಾರ ಮತ್ತು ಹೂಡಿಕೆ ಶೃಂಗಸಭೆಯಲ್ಲಿ ಪ್ರಮುಖ ಭಾಷಣ ಮಾಡಲಿದ್ದು, ಎರಡೂ ದೇಶಗಳ ಪ್ರಮುಖ ಉದ್ಯಮ ನಾಯಕರು ಭಾಗವಹಿಸಲಿದ್ದಾರೆ. ಎರಡನೇ ಹಂತದಲ್ಲಿ ಇದೇ ೨೦ ರಿಂದ ೨೬ ರವರೆಗೆ ಅಮೆರಿಕಾಕ್ಕೆ ಭೇಟಿ ನೀಡುವ ಅವರು ಅಂತರರಾಷ್ಟ್ರೀಯ ಹಣಕಾಸು ನಿಧಿ-ಐಎಂಎಫ್) ಮತ್ತು ವಿಶ್ವ ಬ್ಯಾಂಕ್, ೪ ನೇ ಜಿ ೨೦ ಹಣಕಾಸು ಸಚಿವರು ಮತ್ತು ಸೆಂಟ್ರಲ್ ಬ್ಯಾಂಕ್ ಗವರ್ನರ್‌ಗಳ ವಾರ್ಷಿಕ ಸಭೆಗಳಲ್ಲಿ ಭಾಗವಹಿಸಲಿದ್ದಾರೆ.

<><*<><>*><>

ಜಮ್ಮು ಮತ್ತು ಕಾಶ್ಮೀರದ ಕೇಂದ್ರಾಡಳಿತ ಪ್ರದೇಶದ ಮುಖ್ಯಮಂತ್ರಿಯಾಗಿ ನ್ಯಾಷನಲ್ ಕಾನ್ಫರೆನ್ಸ್ ನಾಯಕ ಒಮರ್ ಅಬ್ದುಲ್ಲಾ ಇಂದು ಪ್ರಮಾಣ ವಚನ ಸ್ವೀಕರಿಸಲಿದ್ದಾರೆ. ಲೆಫ್ಟಿನೆಂಟ್ ಗವರ್ನರ್ ಮನೋಜ್ ಸಿನ್ಹಾ ಅವರು ಶ್ರೀನಗರದ ಶೇರ್-ಎ-ಕಾಶ್ಮೀರ್ ಅಂತಾರಾಷ್ಟ್ರೀಯ ಸಮುದಾಯ ಕೇಂದ್ರದಲ್ಲಿ ಬೆಳಗ್ಗೆ ೧೧:೩೦ ಕ್ಕೆ ಶ್ರೀ ಅಬ್ದುಲ್ಲಾ ಅವರ ಮಂತ್ರಿ ಮಂಡಲದ ಜೊತೆಗೆ ಅವರಿಗೆ ಪ್ರಮಾಣ ವಚನ ಬೋಧಿಸಲಿದ್ದಾರೆ. ೧೦ ವರ್ಷಗಳ ನಂತರ ಇತ್ತೀಚೆಗೆ ನಡೆದ ವಿಧಾನಸಭೆ ಚುನಾವಣೆ. ೨೦೧೪ ರಲ್ಲಿ ಜಮ್ಮು ಮತ್ತು ಕಾಶ್ಮೀರ ವಿಧಾನಸಭೆಗೆ ಕೊನೆಯ ಚುನಾವಣೆಗಳು ನಡೆದಿದ್ದವು. ಸುರಕ್ಷಿತ ಮತ್ತು ಸುಗಮ ಕಾರ್ಯಕ್ರಮವನ್ನು ಖಚಿತಪಡಿಸಿಕೊಳ್ಳಲು ಸ್ಥಳದ ಸುತ್ತಲೂ ವ್ಯಾಪಕ ಭದ್ರತಾ ವ್ಯವಸ್ಥೆಗಳನ್ನು ಮಾಡಲಾಗಿದೆ ಎಂದು ಬಾತ್ಮೀದಾರರು ವರದಿ ಮಾಡಿದ್ದಾರೆ.

<><*<><>*><>

ಜಾರ್ಖಂಡ್‌ನಲ್ಲಿ ಮುಂಬರುವ ವಿಧಾನಸಭೆ ಚುನಾವಣೆಗೆ ಅಭ್ಯರ್ಥಿಗಳ ಆಯ್ಕೆಯನ್ನು ಅಂತಿಮಗೊಳಿಸಲು ಬಿಜೆಪಿಯ ಕೇಂದ್ರ ಚುನಾವಣಾ ಸಮಿತಿ ಸಭೆ ನವದೆಹಲಿಯ ಪಕ್ಷದ ಪ್ರಧಾನ ಕಚೇರಿಯಲ್ಲಿ ನಿನ್ನೆ ನಡೆಯಿತು. ಪ್ರಧಾನಿ ನರೇಂದ್ರ ಮೋದಿ, ಗೃಹ ಸಚಿವ ಅಮಿತ್ ಶಾ, ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆಪಿ ನಡ್ಡಾ ಮತ್ತು ಪಕ್ಷದ ಮತ್ತಿತರ ಹಿರಿಯ ನಾಯಕರು ಸಭೆಯಲ್ಲಿ ಉಪಸ್ಥಿತರಿದ್ದರು.

<><*<><>*><>

ಜಾರ್ಖಂಡ್‌ನಲ್ಲಿ ನಿನ್ನೆ ವಿಧಾನಸಭೆ ಚುನಾವಣೆಯ ವೇಳಾಪಟ್ಟಿ ಘೋಷಣೆಯಾದ ನಂತರ ರಾಜಕೀಯ ಚಟುವಟಿಕೆಗಳು ತೀವ್ರಗೊಂಡಿವೆ. ರಾಜ್ಯದಲ್ಲಿ ಮುಂದಿನ ತಿಂಗಳು ೧೩ ಮತ್ತು ೨೦ ರಂದು ಎರಡು ಹಂತಗಳಲ್ಲಿ ಚುನಾವಣೆ ನಡೆಯಲಿದೆ. ೨೩ರಂದು ಮತ ಎಣಿಕೆ ನಡೆಯಲಿದೆ. ಎನ್‌ಡಿಎ ಮತ್ತು ಮೈತ್ರಿಕೂಟಗಳು ಅಭ್ಯರ್ಥಿಗಳ ಪಟ್ಟಿಯನ್ನು ಅಂತಿಮಗೊಳಿಸುವ ಕಾರ್ಯದಲ್ಲಿ ನಿರತವಾಗಿವೆ. ಸೀಟು ಹಂಚಿಕೆ ಸೂತ್ರವನ್ನು ನಿರ್ಧರಿಸಲು ಅವರು ತಮ್ಮ ಮಿತ್ರಪಕ್ಷಗಳೊಂದಿಗೆ ತೀವ್ರ ಚರ್ಚೆಯಲ್ಲಿ ತೊಡಗಿದ್ದಾರೆ. ಬಿಜೆಪಿಯ ಜಾರ್ಖಂಡ್ ಚುನಾವಣಾ ಸಹ-ಪ್ರಭಾರಿ ಹಿಮಂತ ಬಿಸ್ವಾ ಶರ್ಮಾ ಅವರು ಈ ಬಾರಿ ಬಿಜೆಪಿಯು, ಎಜೆಎಸ್‌ಯು ಪಕ್ಷ, ಸಂಯುಕ್ತ ಜನತಾ ದಳ ಮತ್ತು ಚಿರಾಗ್ ಪಾಸ್ವಾನ್ ನೇತೃತ್ವದ ಎಲ್‌ಜೆಪಿಯೊಂದಿಗೆ ಸ್ಪರ್ಧಿಸಲಿದೆ ಎಂದು ಹೇಳಿದ್ದಾರೆ. ಮತ್ತೊಂದೆಡೆ ಜಾರ್ಖಂಡ್ ಮುಕ್ತಿ ಮೋರ್ಚಾ ಕಾಂಗ್ರೆಸ್, ರಾಷ್ಟ್ರೀಯ ಜನತಾ ದಳ ಮತ್ತು ಸಿಪಿಐ-ಎಂಎಲ್ ಜೊತೆ ಚುನಾವಣೆ ಎದುರಿಸಲಿದೆ.

<><*<><>*><>

ಕೇಂದ್ರ ವಾರ್ತಾ ಮತ್ತು ಪ್ರಸಾರ ಹಾಗೂ ಸಂಸದೀಯ ವ್ಯವಹಾರಗಳ ರಾಜ್ಯ ಸಚಿವ ಡಾ. ಎಲ್. ಮುರುಗನ್ ಅವರು ಕೇಂದ್ರ ಸರ್ಕಾರದ ಸಚಿವಾಲಯದೊಳಗಿನ ಎಲ್ಲಾ ಉದ್ಯೋಗಿಗಳಿಗೆ ಆನ್‌ಲೈನ್ ಕಲಿಕೆಗೆ ಅನುಕೂಲವಾಗುವಂತೆ ಐಗೋಟ್ ಲ್ಯಾಬ್ ಅನ್ನು ಸ್ಥಾಪಿಸಲು ಸಚಿವಾಲಯಕ್ಕೆ ನಿರ್ದೇಶನ ನೀಡಿದ್ದಾರೆ. ಈ ಉಪಕ್ರಮವು ಸಚಿವಾಲಯದ ವಾರ್ಷಿಕ ಸಾಮರ್ಥ್ಯ ವರ್ಧನೆಯ ಚಟುವಟಿಕೆಯಾಗಿ ಹಮ್ಮಿಕೊಳ್ಳಲಾಗಿದೆ. ವಾರ್ತಾ ಮತ್ತು ಪ್ರಸಾರ ಇಲಾಖೆಯ ಕಾರ್ಯದರ್ಶಿ ಸಂಜಯ್ ಜಾಜು ಮತ್ತು ಇತರ ಹಿರಿಯ ಅಧಿಕಾರಿಗಳೊಂದಿಗೆ ನಡೆದ ಪರಿಶೀಲನಾ ಸಭೆಯಲ್ಲಿ, ಸಚಿವರಾದ ಡಾ. ಮುರುಗನ್ ಅವರು ಇದೇ ೧೯ ರೊಳಗೆ ಎಲ್ಲಾ ಸಚಿವಾಲಯದ ಎಲ್ಲಾ ಉದ್ಯೋಗಿಗಳನ್ನು ಐಗೋಟ್ ಲ್ಯಾಬ್ ಪೋರ್ಟಲ್‌ಗೆ ಸೇರಿಸಬೇಕೆಂದು ನಿರ್ದೇಶನ ನೀಡಿದರು. ಸಚಿವಾಲಯವು ಬಜೆಟ್ ನಿರ್ವಹಣೆ ಸೇರಿದಂತೆ, ಲಿಂಗ ಸಂವೇದನೆ, ನಾಯಕತ್ವ ಮತ್ತು ತಂಡ ನಿರ್ಮಾಣ, ಅದರ ಉದ್ಯೋಗಿಗಳ ವೃತ್ತಿಪರ ಕೌಶಲ್ಯಗಳನ್ನು ಹೆಚ್ಚಿಸಲು ೧೮ ಕೋರ್ಸ್‌ಗಳ ಆಯ್ಕೆಯನ್ನು ಶಿಫಾರಸು ಮಾಡಿದೆ.

<><*<><>*><>

ವಕ್ಫ್ ತಿದ್ದುಪಡಿ ಮಸೂದೆ ೨೦೨೪ ಕುರಿತಾದ ಜಂಟಿ ಸಂಸದೀಯ ಸಮಿತಿಯ ಸಭೆ ನಿನ್ನೆ ನವದೆಹಲಿಯಲ್ಲಿ ನಡೆಯಿತು. ಲೋಕಸಭೆ ಸಂಸದ ಜಗದಾಂಬಿಕಾ ಪಾಲ್ ನೇತೃತ್ವದಲ್ಲಿ ಸಭೆ ನಡೆಯಿತು.

ನ್ಯೂನತೆಗಳನ್ನು ನಿವಾರಿಸಲು ಮತ್ತು ವಕ್ಫ್ ಆಸ್ತಿಗಳ ಆಡಳಿತ ಮತ್ತು ನಿರ್ವಹಣೆಯ ದಕ್ಷತೆಯನ್ನು ಹೆಚ್ಚಿಸಲು ಉದ್ದೇಶಿಸಿರುವ ಮಸೂದೆಗೆ ಸಂಬಂಧಿಸಿದಂತೆ ಸಮಿತಿಯು ಅಲ್ಪಸಂಖ್ಯಾತ ವ್ಯವಹಾರಗಳ ಸಚಿವಾಲಯದ ಪ್ರತಿನಿಧಿಗಳಿಂದ ಮೌಖಿಕ ಸಾಕ್ಷ್ಯವನ್ನು ದಾಖಲಿಸಿಕೊಂಡಿತು. ಮಸೂದೆಯನ್ನು ಹೆಚ್ಚಿನ ಪರಿಶೀಲನೆಗಾಗಿ ಜಂಟಿ ಸಂಸದೀಯ ಸಮಿತಿಗೆ ಸಲ್ಲಿಸಲಾಗಿದ್ದು. ಅದು ಈ ವರ್ಷದ ಸಂಸತ್ತಿನ ಚಳಿಗಾಲದ ಅಧಿವೇಶನದಲ್ಲಿ ತನ್ನ ವರದಿಯನ್ನು ಸಂಸತ್ತಿಗೆ ಸಲ್ಲಿಸಲು ನಿರ್ಧರಿಸಿದೆ.

<><*<><>*><>

ಬಂಗಾಳಕೊಲ್ಲಿಯಲ್ಲಿ ಉಂಟಾಗಿರುವ ವಾಯುಭಾರ ಕುಸಿತದ ಪರಿಣಾಮ ಬೆಂಗಳೂರು ಸೇರಿದಂತೆ ಕರ್ನಾಟಕ ರಾಜ್ಯದ ಹಲವು ಜಿಲ್ಲೆಗಳಲ್ಲಿ ಮಳೆ ಮುಂದುವರಿದಿದೆ. ಕಳೆದ ಎರಡು ದಿನಗಳಿಂದ ಎಡೆಬಿಡದೆ ಸುರಿಯುತ್ತಿರುವ ಮಳೆ ಇಂದೂ ಸಹ ಮುಂದುವರಿಯಲಿದೆ. ಬಳ್ಳಾರಿ, ಮೈಸೂರು, ಕೊಡಗು, ಚಾಮರಾಜನಗರ, ಮಂಡ್ಯ, ಬೆಂಗಳೂರು ಸೇರಿದಂತೆ ಹಲವು ಜಿಲ್ಲೆಗಳಲ್ಲಿ ಇಂದು ಮಳೆಯಾಗುತ್ತಿದ್ದು, ಹವಾಮಾನ ಇಲಾಖೆ ಆರೆಂಜ್ ಅಲರ್ಟ್ ಘೋಷಿಸಿದೆ. ದಕ್ಷಿಣಕನ್ನಡ, ಉಡುಪಿ, ಚಿಕ್ಕಮಗಳೂರು, ತುಮಕೂರು ಜಿಲ್ಲೆಗಳಲ್ಲಿ ಯೆಲ್ಲೋ ಅಲರ್ಟ್ ನೀಡಲಾಗಿದೆ. ಮಳೆಯ ಕಾರಣಕ್ಕೆ ಇಂದು ಬೆಂಗಳೂರು ನಗರ ಜಿಲ್ಲೆಯ ಶಾಲೆಗಳಿಗೆ ಜಿಲ್ಲಾಧಿಕಾರಿ ರಜೆ ಘೋಷಿಸಿದ್ದಾರೆ.

<><*<><>*><>

ಭಾರತ ಮತ್ತು ಪ್ರವಾಸಿ ನ್ಯೂಜಿಲೆಂಡ್ ತಂಡಗಳ ನಡುವೆ ಬೆಂಗಳೂರಿನ ಎಂ. ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿಂದು ಮೂರು ಪಂದ್ಯಗಳ ಟೆಸ್ಟ್ ಸರಣಿಯ ಮೊದಲ ಪಂದ್ಯ ಆರಂಭವಾಗಲಿದೆ. ಪಂದ್ಯ ಬೆಳಗ್ಗೆ ೯.೩೦ರಿಂದ ಆರಂಭವಾಗಲಿದ್ದು, ರೋಹಿತ್ ಶರ್ಮಾ ನಾಯಕತ್ವದ ಟೀಂ ಇಂಡಿಯಾ ಶುಭಾರಂಭ ಮಾಡುವ ವಿಶ್ವಾಸದಲ್ಲಿದೆ. ಆದರೆ, ಪ್ರಸ್ತುತದ ಹವಾಮಾನದ ಪ್ರಕಾರ, ಇಡೀ ಪಂದ್ಯಕ್ಕೆ ಮಳೆ ಅಡ್ಡಿಪಡಿಸುವ ಸಾಧ್ಯತೆ ಇದೆ. ಅದರಲ್ಲೂ ಮೊದಲ ಎರಡು ದಿನದಾಟ ಸಂಪೂರ್ಣ ಮಳೆಗೆ ಆಹುತಿಯಾಗುವ ಆತಂಕವಿದೆ. ನಿನ್ನೆ ಬೆಂಗಳೂರು ನಗರದೆಲ್ಲೆಡೆ ಎಡೆಬಿಡದೇ ಮಳೆ ಸುರಿದಿದೆ.ಬೆಳಗಿನಿಂದಲೂ ಸಹ ಮಳೆಯಾಗುತ್ತಿದೆ. ಹವಾಮಾನ ಇಲಾಖೆಯ ಮುನ್ಸೂಚನೆಯಂತೆ , ಮುಂದಿನ ನಾಲ್ಕು ದಿನ ಬೆಂಗಳೂರು ನಗರದಲ್ಲಿ ಧಾರಾಕಾರ ಮಳೆಯಾಗುವ ನಿರೀಕ್ಷೆ ಇದೆ. ಮಳೆಯಿಂದಾಗಿ ನಿನ್ನೆ ಉಭಯ ತಂಡಗಳ ಅಭ್ಯಾಸ ಕೂಡ ರದ್ದಾಗಿತ್ತು.

ಐಸಿಸಿ ಟೆಸ್ಟ್ ಚಾಂಪಿಯನ್‌ಶಿಪ್‌ನಲ್ಲಿ ಅಗ್ರಸ್ಥಾನ ಉಳಿಸಿಕೊಳ್ಳಬೇಕಾದರೆ, ಭಾರತೀಯ ಆಟಗಾರರು ದುರ್ಬಲವಾಗಿರುವ ಕಿವೀಸ್ ತಂಡದ ವಿರುದ್ಧ ಸರ್ವಾಂಗೀಣ ಪ್ರದರ್ಶನ ನೀಡುವುದು ಅತ್ಯಗತ್ಯ. ನಾಯಕ ರೋಹಿತ್ ಶರ್ಮ, ವಿರಾಟ್ ಕೊಹ್ಲಿ, ಯಶಸ್ವಿ ಜೈಸ್ವಾಲ್, ಶುಭಮನ್ ಗಿಲ್, ಕೆ.ಎಲ್. ರಾಹುಲ್ ಮತ್ತು ರಿಷಭ್ ಪಂತ್ ಭಾರತ ತಂಡದ ಬ್ಯಾಟಿಂಗ್ ಶಕ್ತಿಯಾಗಿದ್ದಾರೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಅಪರಾಹ್ನ ೧.೧೦ ಕ್ಕೆ <>*><>